## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 85 |
| 2. | ಸದಸ್ಯರ ಹೆಸರು | : | ಶ್ರೀ ರಿಜ್ವಾನ್ ಅರ್ಷದ್ |
| 3. | ಉತ್ತರಿಸಬೇಕಾದ ದಿನಾಂಕ | : | 09.07.2018 |
| 4. | ಉತ್ತರಿಸಬೇಕಾದ ಸಚಿವರು | : | ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>(ಅ)</td><td>ನಕಲಿ ವೈದ್ಯ ಸರ್ಟಿಫಿಕೇಟ್‌ಗಳನ್ನು ಸೃಷ್ಟಿಸಿ ಮಾರಾಟ ಮಾಡುವುದು ಮತ್ತು ಅಂಕಪಟ್ಟಿಗಳನ್ನು ತಿದ್ದುವ ಅಕ್ರಮ ದಂಧೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ನಕಲಿ ವೈದ್ಯ ಪ್ರಮಾಣಪತ್ರಗಳನ್ನು ಸೃಷ್ಟಿಸಿ ಮಾರಾಟ ಮಾಡುವುದು ಮತ್ತು ಅಂಕಪಟ್ಟಿಗಳನ್ನು ತಿದ್ದುವ ಅಕ್ರಮ ದಂಧೆಯು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಆದರೆ, ನರ್ಸಿಂಗ್ ಕೋರ್ಸಿನ ಅಂಕಪಟ್ಟಿ ತಿದ್ದುಪಡಿ ಮಾಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ವಿಚಾರಣೆ ನಡೆಸಿ, ವರದಿಯನ್ನು ಸಲ್ಲಿಸುವಂತೆ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ-ಕುಲಪತಿಗಳಿಗೆ ದಿ: 02-03-2018 ರಂದು ಸೂಚಿಸಲಾಗಿದ್ದು, ಈ ಸಂಬಂಧವಾಗಿ ವಿಶ್ವವಿದ್ಯಾಲಯವು ದಿ: 06-03-2018 ರಂದು ಸಮಿತಿಯೊಂದನ್ನು ರಚಿಸಿರುತ್ತದೆ.<br><br>ಕೆಲವು ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ದೂರಿನ ಮೇರೆಗೆ ವಿಶ್ವವಿದ್ಯಾಲಯದ ತಂಡದಿಂದ ದಿ: 07-03-2018 ರಂದು ಹಾಸ್ಮಟ್ ಗ್ರೂಪ್ ಆಫ್ ಇನ್ಸ್‌ಟಿಟ್ಯೂಷನ್ಸ್ ಮತ್ತು ಬೆಥೆಲ್ ಇನ್ಸ್‌ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್, ಬೆಂಗಳೂರು ಸಂಸ್ಥೆಗಳಿಗೆ ಧಿಡೀರ್ ತಪಾಸಣೆ ಕೈಗೊಂಡಿದ್ದು, ಅಲ್ಲಿದ್ದ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಸದರಿ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡು ಬಂದಿರುತ್ತದೆ.<br><br>ಅಲ್ಲದೇ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ರಚಿಸಿದ್ದ ಸಮಿತಿಯು ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿ, ದಿ: 23-05-2018 ರಂದು ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿಯೂ ಸಹ ಈ ಪ್ರಕರಣವು ಅಂಕಪಟ್ಟಿ ತಿದ್ದುಪಡಿ ಮಾಡಿರುವ ಪ್ರಕರಣ ಎಂದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ.</td></tr>
<tr><td>(ಆ)</td><td>ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಪೂರ್ಣ ವಿವರ ನೀಡುವುದು; ಬರದಿದ್ದಲ್ಲಿ, ಈ ಬಗ್ಗೆ ಕೂಲಂಕಷವಾಗಿ ವಿಚಾರಣೆ ನಡೆಸಿ ತಕ್ಷಣ ಕ್ರಮಕೈಗೊಳ್ಳಲಾಗುವುದೇ;</td></tr>
</table>

| | | |
|---|---|---|
| | | ಇದೊಂದು ಗಂಭೀರ ಪ್ರಕರಣವಾದ್ದರಿಂದ ಈ ಪ್ರಕರಣದಲ್ಲಿ ಭಾಗಿಯಾದ ಸಿಬ್ಬಂದಿಗಳ ಮೇಲೆ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕೆಂದು ವಿಶ್ವವಿದ್ಯಾಲಯವು ನೀಡಿದ ದೂರಿನನ್ವಯ ದಿನಾಂಕ: 12-03-2018 ರಂದು ಬೆಂಗಳೂರು ನಗರ ತಿಲಕ್‌ನಗರ ಪೋಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 97/2018 ರಲ್ಲಿ ದಾಖಲಾದ ಪ್ರಕರಣವನ್ನು ಸರ್ಕಾರದ ಆದೇಶ ಸಂಖ್ಯೆ: ಒಇ 22 ಸಿಐಡಿ 2018, ದಿ: 28-04-2018 ರನ್ವಯ ಸಿಐಡಿ ತನಿಖೆಗೆ ವಹಿಸಿ ಆದೇಶಿಸಿದ್ದು, ಸದರಿ ಆದೇಶದ ಪ್ರತಿಯನ್ನು <u>ಅನುಬಂಧ</u> ದಲ್ಲಿ ನೀಡಲಾಗಿದೆ. |
| (ಇ) | ಸದರಿ ಧಂದೆಯಲ್ಲಿ ತಪ್ಪಿತಸ್ಥ ವೈದ್ಯಕೀಯ ಕಾಲೇಜುಗಳ ಮೇಲೆ ಮತ್ತು ಅಕ್ಷಮ್ಯ ಅಪರಾಧ ಎಸಗಿದವರ ಮೇಲೆ ಕಾನೂನು ರೀತ್ಯಾ ತೆಗೆದುಕೊಂಡ ಕ್ರಮಗಳ ಪೂರ್ಣ ವಿವರ ನೀಡುವುದು? | ಸರ್ಕಾರವು ಸದರಿ ಪ್ರಕರಣದಲ್ಲಿ ಭಾಗಿಯಾಗಿರುವ ನರ್ಸಿಂಗ್ ಕಾಲೇಜುಗಳ ಮೇಲೆ ಮತ್ತು ಅಪರಾಧ ಎಸಗಿದವರ ಮೇಲೆ ಸಿಐಡಿ ವರದಿ ಬಂದ ತಕ್ಷಣ ಕಾನೂನು ರೀತ್ಯಾ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳಲಾಗುವುದು. ಈ ಪ್ರಕರಣದಲ್ಲಿ ಯಾವುದೇ ವೈದ್ಯಕೀಯ ಕಾಲೇಜುಗಳು ಭಾಗಿಯಾಗಿರುವುದು ಕಂಡುಬಂದಿಲ್ಲ. |

ಸಂಖ್ಯೆ: ಆಕುಕ 207 ಆರ್‌ಜಿಯು 2018

(ಡಿ.ಕೆ.ಶಿವಕುಮಾರ್)
ವೈದ್ಯಕೀಯ ಶಿಕ್ಷಣ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಹೆಸರಿನಲ್ಲಿ ನಕಲಿ ಅಂಕಪಟ್ಟಿ ಹಾಗೂ ಪ್ರಮಾಣ ಪತ್ರಗಳನ್ನು ವಿತರಿಸಿರುವ ಸಂಸ್ಥೆಗಳ ವಿರುದ್ಧ ತನಿಖೆ ನಡೆಸುವ ಕುರಿತು.

ಓದಲಾಗಿದೆ:

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ) ಕಡತ ಸಂಖ್ಯೆ:ಆಕುಕ 92 ಆರ್‌ಜಿಯು2018.

<u>ಪ್ರಸ್ತಾವನೆ:-</u>

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ) ರವರ ಓದಲಾದ ಕಡತದಲ್ಲಿ ದಿನಾಂಕ 02.03.2018ರಂದು ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಕಲಿ ಅಂಕಪಟ್ಟಿಗಳು ಮತ್ತು ಸೀಲ್‌ಗಳ ಮಾಹಿತಿ ಛಾಪಿಸಿದ್ದು, ಸದರಿ ನ್ಯೂಸ್‌ನ ಬಗ್ಗೆ ತನಿಖೆ ಕೈಗೊಳ್ಳಲು ವೈದ್ಯಕೀಯ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಉಪ-ಕುಲಪತಿಗಳಿಗೆ ಆದೇಶಿಸಿದ್ದು, ಇದೇ ವೇಳೆ ಇರಾನಿನ ವಿದ್ಯಾರ್ಥಿಗೆ ನಕಲಿ ಹಾಲ್ ಟಿಕೆಟ್ ನೀಡಿದುದ್ದರ ಮಾಹಿತಿ ಮೇರೆಗೆ, ದಿನಾಂಕ 07.03.2018 ರಂದು ಒಂದು ಸಮಿತಿ ರಚಿಸಿರುತ್ತಾರೆ. ಸಮಿತಿಯ ಸದಸ್ಯರು ಅದೇ ದಿನ ಮಾಹಿತಿ ಮೇರೆಗೆ ಹಾಸ್ಮಟ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಮತ್ತು ಬೆತೆಲ್ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್, ಬೆಂಗಳೂರು ಸಂಸ್ಥೆಗಳಿಗೆ ಭೇಟಿ ನೀಡಿದ್ದು, ಅಲ್ಲಿದ್ದ ದಾಖಲಾತಿಗಳನ್ನು ಪರಿಶೀಲಿಸಲಾಗಿ ಕಂಪ್ಯೂಟರ್ ನಲ್ಲಿ 'EDITED MARKS CARDS' ಎಂಬ File ಇದ್ದು, ಉಳಿದ ದಾಖಲಾತಿಗಳನ್ನು ಪರಿಶೀಲಿಸುವಾಗ ವಿದ್ಯುತ್ ಸಂಪರ್ಕ ನಿಂತಿದ್ದು, ಪರಿಶೀಲನೆ ಅರ್ಧಕ್ಕೆ ನಿಂತಿರುತ್ತದೆ. ಆಗ ಸಮಿತಿಯು ಪರಿಶೀಲನೆಯನ್ನು ಅರ್ಧಕ್ಕೆ ನಿಲ್ಲಿಸಿದ್ದು ಕಾಲೇಜಿನ ಪ್ರಾಂಶುಪಾಲರವರೇ ಖುದ್ದಾಗಿ ತನಿಖೆಗೆ ಬೇಕಾಗಿರುವ ಹಾರ್ಡ್ ಡಿಸ್ಕ್, ದಾಖಲಾತಿಗಳು, ಸೀಲ್‌ಗಳನ್ನು ಅಮಾನತ್ತು ಮಾಡಿಕೊಳ್ಳಲು ಸಹಾಯ ಮಾಡಿರುತ್ತಾರೆ, ಅಲ್ಲದೇ ಬೆತೆಲ್ ಇನ್‌ಸ್ಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್, ಆವರಣದಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ನಿಯಮಗಳಿಗೆ ಬಾಹಿರವಾಗಿ ಇನ್ನೂ ಬೇರೆ ಬೇರೆ ಇನ್ಸ್‌ಟಿಟ್ಯೂಟ್‌ಗಳೂ ಸಹ ನಡೆಸಲ್ಪಟ್ಟಿರುವುದು ಕಂಡು ಬರುತ್ತದೆ ಮತ್ತು ಬೇರೆ ಬೇರೆ ರಬ್ಬರ್ ಸ್ಟ್ಯಾಂಪ್‌ಗಳೂ, ದಾಖಲಾತಿಗಳೂ ಲಭ್ಯವಾಗಿರುತ್ತವೆ. ಈ ಮೇಲ್ಕಂಡ ಕಾಲೇಜಿನಲ್ಲಿ ನಕಲಿ ಮಾರ್ಕ್ಸ್ ಕಾರ್ಡ್‌ಗಳನ್ನೂ ಸಹ ದಾಖಲಿಸಿದ್ದು ಕಂಡು ಬಂದಿರುತ್ತದೆ. ಕೆಲವು ವಿದ್ಯಾರ್ಥಿಗಳಿಗೆ ಕೋರ್ಸ್ ಚಾಲ್ತಿಯಲ್ಲಿದ್ದರೂ ಸಹ ಕೋರ್ಸ್ ಮುಗಿದಿರುವಂತೆ ಮಾರ್ಕ್ಸ್ ಕಾರ್ಡ್‌ಗಳನ್ನು ನೀಡಿರುತ್ತಾರೆ. ಸದರಿ ಪ್ರಕರಣದಲ್ಲಿ ಹಾಸ್ಮಟ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ ಮತ್ತು ಬೆತೆಲ್ ಇನ್‌ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್, ಬೆಂಗಳೂರು ಇಲ್ಲಿನ ಕೆಲವು ಸಿಬ್ಬಂದಿಗಳು ಕಾರಣರಾಗಿದ್ದು, ಸದರಿಯವರು ನಕಲಿ ದಾಖಲಾತಿಗಳು, ರಬ್ಬರ್ ಸ್ಟಾಂಪ್ ಮತ್ತು ಮಾರ್ಕ್ಸ್ ಕಾರ್ಡ್‌ಗಳನ್ನು ರಚಿಸುವಲ್ಲಿ ಭಾಗಿಯಾಗಿದ್ದು, ಸದರಿಯವರ ಮೇಲೆ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬೇಕೆಂದು ಇತ್ಯಾದಿ ಕೊಟ್ಟ ದೂರಿನ ಅನ್ವಯ ದಿನಾಂಕ 12.03.2018 ರಂದು ಬೆಂಗಳೂರು ನಗರ ತಿಲಕ್‌ನಗರ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 97/2018 ರಲ್ಲಿ ಪ್ರಕರಣವನ್ನು ದಾಖಲಿಸಿ ಪ್ರಕರಣವನ್ನು ಸಿಐಡಿಗೆ ವಹಿಸಲು ಸೂಕ್ತ ಆದೇಶ ಹೊರಡಿಸುವಂತೆ ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ರವರು ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: ಒಇ 22 ಸಿಐಡಿ 2018, ಬೆಂಗಳೂರು ದಿನಾಂಕ: 28/04/2018.</u>

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಬೆಂಗಳೂರು ನಗರ, ತಿಲಕ್‌ನಗರ ಪೊಲೀಸ್ ಠಾಣೆ ಅಪರಾಧ ಸಂಖ್ಯೆ: 97/2018 ಐಪಿಸಿ 1860(ಕಲಂ 465, 467, 468, 471, 472 ,474,

2...

420, 34)ರಲ್ಲಿ ದಾಖಲಾದ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿ ಆದೇಶಿಸಿದೆ. ಈ ತನಿಖೆ ನಡೆಸಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ) ಯು ಸಿಐಡಿ ತಂಡದವರಿಗೆ ಸಂಪೂರ್ಣ ಸಹಕಾರ ಮತ್ತು ಅವಶ್ಯ ದಾಖಲಾತಿಗಳನ್ನು/ಮಾಹಿತಿ ಸಹ ಒದಗಿಸುವುದು.

ಸಿಐಡಿ ತಂಡವು ಈ ಪ್ರಕರಣದ ತನಿಖೆಯನ್ನು ಶೀಘ್ರವಾಗಿ ಪೂರ್ಣಗೊಳಿಸಿ ವರದಿಯನ್ನು ನ್ಯಾಯಾಲಯಕ್ಕೆ ತ್ವರಿತವಾಗಿ ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳುವುದು ಮತ್ತು ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ವರದಿ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಎಸ್.ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಅಪರಾಧಗಳು)

ಇವರಿಗೆ:

1) ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ ಬೆಂಗಳೂರು.
2) ಪೊಲೀಸ್ ಮಹಾ ನಿರ್ದೇಶಕರು, ಸಿಐಡಿ, ವಿಶೇಷ ಘಟಕಗಳು ಮತ್ತು ಆರ್ಥಿಕ ಅಪರಾಧಗಳು, ಕಾರ್ಲಟನ್ ಭವನ, ಅರಮನೆ ರಸ್ತೆ, ಬೆಂಗಳೂರು.
3) ಪೊಲೀಸ್ ಇನ್ಸ್‌ಪೆಕ್ಟರ್ , ತಿಲಕ್‌ನಗರ ಪೊಲೀಸ್ ಠಾಣೆ, ಬೆಂಗಳೂರು ನಗರ.

ಪ್ರತಿಯನ್ನು:

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿ,
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ), ಇವರ ಆಪ್ತ ಕಾರ್ಯದರ್ಶಿ
5. ಸರ್ಕಾರದ ಕಾರ್ಯದರ್ಶಿ (ಪಿ.ಸಿ.ಎ.ಎಸ್) ಒಳಾಡಳಿತ ಇಲಾಖೆ ರವರ ವಿಧಾನಸೌಧ, ಬೆಂಗಳೂರು ರವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಉಪ ಕಾರ್ಯದರ್ಶಿ (ಅಪರಾಧಗಳು) ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಸಮನ್ವಯ).
8. ಹೆಚ್ಚುವರಿ ಪ್ರತಿ/ಶಾಖಾ ರಕ್ಷ ಕಡತ.